Akashvani: Bangalore
National News In Kannada
31.10.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು :**

1. ವಿಕಸಿತ ಭಾರತದ ಕನಸು ಸಾಕಾರಕ್ಕೆ ತಮ್ಮನ್ನು ತಾವು ಸಮರ್ಪಿಸಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ
2. ಸರ್ದಾರ್ ವಲ್ಲಭಭಾಯ್ ಪಟೇಲ್ ೧೫೦ನೇ ಜನ್ಮದಿನಾಚರಣೆ; ಸರ್ದಾರ್ ಪ್ರತಿಮೆಗೆ ರಾಷ್ಟ್ರಪತಿ ಪುಷ್ಪ ನಮನ; ಏಕತಾ ಓಟಕ್ಕೆ ಸಚಿವ ಅಮಿತ್ ಶಾ ಚಾಲನೆ
3. ಬಿಹಾರ ವಿಧಾನಸಭಾ ಚುನಾವಣೆ; ಎನ್‌ಡಿಎ ಯಿಂದ ಜಂಟಿ ಸಂಕಲ್ಪ ಪತ್ರ ಬಿಡುಗಡೆ; ಪಂಚಾಮೃತ ಖಾತ್ರಿಯ ಭರವಸೆ
4. ಮುಂದಿನ ೧೦ ವರ್ಷಗಳ ಕಾಲ ರಕ್ಷಣಾ ಸಹಕಾರ ಒಪ್ಪಂದಕ್ಕೆ ಭಾರತ-ಅಮೆರಿಕ ಸಹಿ
5. ಐದು ಪಂದ್ಯಗಳ ಟಿ೨೦ ಕ್ರಿಕೆಟ್ ಸರಣಿ; ಎರಡನೇ ಪಂದ್ಯದಲ್ಲಿಂದು ಭಾರತ-ಆಸ್ಟ್ರೇಲಿಯಾ ಮುಖಾಮುಖಿ

******

ವಿಕಸಿತ ಭಾರತದ ಕನಸನ್ನು ಸಾಧಿಸಲು ದೇಶದ ಪ್ರಗತಿಗೆ ತಮ್ಮನ್ನು ತಾವು ಅರ್ಪಿಸಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ನಾಗರಿಕರಿಗೆ ಕರೆ ನೀಡಿದ್ದಾರೆ. ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯ ಅಂಗವಾಗಿ ಏಕ್ತಾ ನಗರದಲ್ಲಿ ನಡೆದ ರಾಷ್ಟ್ರೀಯ ಏಕತಾ ದಿನದ ಆಚರಣೆಯಲ್ಲಿ ಬೃಹತ್ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ೨೦೧೪ ರಿಂದ ಸರ್ಕಾರ ನಕ್ಸಲ್ ಮತ್ತು ಮಾವೋವಾದಿ ಭಯೋತ್ಪಾದನೆಗೆ ನಿರ್ಣಾಯಕ ಮತ್ತು ಪ್ರಬಲ ಹೊಡೆತ ನೀಡಿದೆ. ೨೦೧೪ರ ಮೊದಲು ದೇಶಾದ್ಯಂತ ಸುಮಾರು ನೂರು ಜಿಲ್ಲೆಗಳು ಮಾವೋವಾದಿ ಚಟುವಟಿಕೆಗಳಿಂದ ಪ್ರಭಾವಿತವಾಗಿದ್ದವು, ಆದರೆ ಇಂದು ಆ ಸಂಖ್ಯೆ ಕೇವಲ ಹನ್ನೊಂದಕ್ಕೆ ಇಳಿದಿದೆ. ಕೇವಲ ಮೂರು ಜಿಲ್ಲೆಗಳು ಮಾತ್ರ ಮಾವೋವಾದದಿಂದ ಗಂಭೀರವಾಗಿ ಪ್ರಭಾವಿತವಾಗಿವೆ ಎಂದು ಹೇಳಿದರು.

ಏಕತಾ ಪ್ರತಿಜ್ಞೆಯಲ್ಲಿ ಕೋಟ್ಯಂತರ ಜನರ ರಾಷ್ಟ್ರವ್ಯಾಪಿ ಭಾಗವಹಿಸುವಿಕೆಯನ್ನು ಉಲ್ಲೇಖಿಸಿದ ಪ್ರಧಾನಿ, ರಾಷ್ಟ್ರೀಯ ಏಕತೆಯನ್ನು ಬಲಪಡಿಸುವ ಸಾಮೂಹಿಕ ಸಂಕಲ್ಪವನ್ನು ಪುನರುಚ್ಚರಿಸಿದರು. ಪ್ರತಿಯೊಬ್ಬ ನಾಗರಿಕನು ರಾಷ್ಟ್ರದ ಸಮಗ್ರತೆಯನ್ನು ದುರ್ಬಲಗೊಳಿಸುವ ಯಾವುದೇ ಚಿಂತನೆ ಅಥವಾ ಕ್ರಿಯೆಯನ್ನು ತಿರಸ್ಕರಿಸಬೇಕು, ಇದು ಇಂದಿನ ಅಗತ್ಯ ಎಂದರು. ಸ್ವಾತಂತ್ರ್ಯದ ನಂತರ, ಸರ್ದಾರ್ ಪಟೇಲ್ ಅವರು ೫೫೦ ಕ್ಕೂ ಹೆಚ್ಚು ಪ್ರಾಂತ್ಯಗಳನ್ನು ಒಗ್ಗೂಡಿಸುವ ಮೂಲಕ ಅಸಾಧ್ಯವೆಂದು ತೋರಿದ್ದನ್ನು ಸಾಧಿಸಿದರು, 'ಏಕ್ ಭಾರತ್, ಶ್ರೇಷ್ಠ ಭಾರತ್' ಎಂಬ ದೃಷ್ಟಿಕೋನವನ್ನು ಸಾಕಾರಗೊಳಿಸಿದರು ಎಂದು ಪ್ರಧಾನಿ ಹೇಳಿದರು. ದ್ವಾದಶ ಜ್ಯೋತಿರ್ಲಿಂಗಗಳು, ಶಕ್ತಿಪೀಠಗಳು ಮತ್ತು ಚಾರ್‌ಧಾಮ್ ಉಲ್ಲೇಖಿಸಿ ಭಾರತದ ಶ್ರೀಮಂತ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯ ಕುರಿತು ಮಾತನಾಡಿದರು. ಭಾಷೆಗಳನ್ನು ಏಕತೆಯ ಸಂಕೇತಗಳೆಂದು ಕರೆದ ಪ್ರಧಾನಿ, ಎಲ್ಲಾ ಭಾರತೀಯ ಭಾಷೆಗಳನ್ನು ಉತ್ತೇಜಿಸುವ ಮತ್ತು ಸಂರಕ್ಷಿಸುವ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದರು. ಕಳೆದ ದಶಕದಲ್ಲಿ ೨೫ ಕೋಟಿ ಜನರನ್ನು ಬಡತನದಿಂದ ಹೊರತರಲಾಗಿದೆ ದೇಶಾದ್ಯಂತ ಪಾರದರ್ಶಕ ಆಡಳಿತ, ಮೂಲಸೌಕರ್ಯ ವಿಸ್ತರಣೆ ಮತ್ತು ಭ್ರಷ್ಟಾಚಾರ ಮುಕ್ತ ನೀತಿಗಳು ಇದಕ್ಕೆ ಕಾರಣವೆಂದು ಅವರು ಶ್ಲಾಘಿಸಿದರು. ಇದಕ್ಕೂ ಮುನ್ನ ಪ್ರಧಾನಿ, ಏಕತಾ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಅವರು ಏಕತಾ

ದಿವಸ್ ಪ್ರತಿಜ್ಞೆಯನ್ನು ಬೋಧಿಸಿದರು. ಬಿಎಸ್‌ಎಫ್, ಸಿಆರ್‌ಪಿಎಫ್ ಮತ್ತು ವಿವಿಧ ರಾಜ್ಯ ಪೊಲೀಸ್ ಪಡೆಗಳ ತುಕಡಿಗಳು, 'ವೈವಿಧ್ಯತೆಯಲ್ಲಿ ಏಕತೆ' ಎಂಬ ವಿಷಯವನ್ನು ಪ್ರತಿಬಿಂಬಿಸುವ ಹತ್ತು ರೋಮಾಂಚಕ ಸ್ತಬ್ಧಚಿತ್ರಗಳನ್ನು ಒಳಗೊಂಡ ಭವ್ಯವಾದ ಏಕತಾ ದಿವಸ್ ಮೆರವಣಿಗೆಯನ್ನು ಸಹ ಪ್ರಧಾನಿ ವೀಕ್ಷಿಸಿದರು.

******

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ ನೇ ಜನ್ಮ ದಿನಾಚರಣೆಯಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ನವದೆಹಲಿಯ ಪಟೇಲ್ ಚೌಕ್‌ನಲ್ಲಿರುವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಕೂಡ ಸರ್ದಾರ್ ಪಟೇಲ್ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿದರು. ಸರ್ದಾರ್ ಪಟೇಲ್ ಅವರನ್ನು ಒಬ್ಬ ಮಹಾನ್ ದೇಶಭಕ್ತ, ದಾರ್ಶನಿಕ ನಾಯಕ ಮತ್ತು ರಾಷ್ಟ್ರನಿರ್ಮಾತೃ ಎಂದು ರಾಷ್ಟ್ರಪತಿಗಳು ಬಣ್ಣಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿ, ಅಚಲವಾದ ಸಂಕಲ್ಪ, ಅದಮ್ಯ ಧೈರ್ಯ ಮತ್ತು ನಾಯಕತ್ವದ ಮೂಲಕ ರಾಷ್ಟ್ರವನ್ನು ಒಗ್ಗೂಡಿಸುವ ಐತಿಹಾಸಿಕ ಕಾರ್ಯವನ್ನು ಅವರು ಸಾಧಿಸಿದರು. ಸರ್ದಾರ್ ಪಟೇಲ್ ಅವರ ಸಮರ್ಪಣೆ ಮತ್ತು ರಾಷ್ಟ್ರಸೇವೆಯ ಮನೋಭಾವ ಎಲ್ಲಾ ಭಾರತೀಯರಿಗೆ ಸ್ಫೂರ್ತಿ ನೀಡುತ್ತಿದೆ ಎಂದು ಹೇಳಿದ್ದಾರೆ. ಸರ್ದಾರ್ ವಲ್ಲಭಭಾಯಿ ಪಟೇಲ್ ಭಾರತದ ಏಕೀಕರಣದ ಹಿಂದಿನ ಪ್ರೇರಕಶಕ್ತಿಯಾಗಿದ್ದರು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಷ್ಟ್ರೀಯ ಸಮಗ್ರತೆ, ಉತ್ತಮ ಆಡಳಿತ ಮತ್ತು ಸಾರ್ವಜನಿಕ ಸೇವೆಗೆ ಪಟೇಲ್ ಅವರ ಅಚಲ ಬದ್ಧತೆ ಹಲವು ಪೀಳಿಗೆಗೆ ಸ್ಫೂರ್ತಿ ನೀಡುತ್ತದೆ ಎಂದು ತಿಳಿಸಿದ್ದಾರೆ.

******

ರಾಷ್ಟ್ರೀಯ ಏಕತಾ ದಿನದ ಅಂಗವಾಗಿ ದೆಹಲಿಯ ಮೇಜರ್ ಧ್ಯಾನ್ ಚಂದ್ ರಾಷ್ಟ್ರೀಯ ಕ್ರೀಡಾಂಗಣದಿಂದ 'ಏಕತಾ ಓಟ'ಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಸ್ವಾತಂತ್ರ್ಯದ ನಂತರ ದೇಶವನ್ನು ಒಗ್ಗೂಡಿಸುವಲ್ಲಿ, ಇಂದಿನ ಭಾರತವನ್ನು ನಿರ್ಮಿಸುವಲ್ಲಿ ಮತ್ತು ಏಕೀಕೃತ ದೇಶವನ್ನು ಸೃಷ್ಟಿಸುವಲ್ಲಿ ಸರ್ದಾರ್ ಪಟೇಲ್ ಅಪಾರ ಕೊಡುಗೆ ನೀಡಿದ್ದಾರೆ. ೨೦೧೪ ರಿಂದ ಪ್ರತಿವರ್ಷ ಅಕ್ಟೋಬರ್ ೩೧ ರಂದು ಸರ್ಕಾರವು ಸರ್ದಾರ್ ಪಟೇಲ್ ಅವರ ಗೌರವಾರ್ಥವಾಗಿ ಏಕತಾ ಓಟ ಕಾರ್ಯಕ್ರಮವನ್ನು ಆಯೋಜಿಸುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕೇಂದ್ರ ಸಚಿವರಾದ ಮನೋಹರ್ ಲಾಲ್ ಖಟ್ಟರ್, ಮನ್ಸುಖ್ ಮಾಂಡವಿಯಾ, ಸಚಿವ ಬಂಡಿ ಸಂಜಯ್ ಕುಮಾರ್, ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ ಮತ್ತು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಉಪಸ್ಥಿತರಿದ್ದರು. 'ಏಕತಾ ಓಟದ ಭಾಗವಾಗಿ ಕರ್ನಾಟಕ, ಒಡಿಶಾ, ಮಣಿಪುರ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಓಟಗಳನ್ನು ಆಯೋಜಿಸಲಾಗಿದೆ.

******

ಬಿಹಾರ ವಿಧಾನಸಭಾ ಚುನಾವಣೆ ೨೦೨೫ ಕ್ಕೆ ಎನ್‌ಡಿಎ ಇಂದು ಜಂಟಿ ಸಂಕಲ್ಪ ಪತ್ರವನ್ನು ಬಿಡುಗಡೆ ಮಾಡಿದೆ. ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಬಿಜೆಪಿಯ ಬಿಹಾರ ಚುನಾವಣಾ ಉಸ್ತುವಾರಿ ಧರ್ಮೇಂದ್ರ ಪ್ರಧಾನ್ ಮತ್ತು ಇತರ ಎನ್‌ಡಿಎ ನಾಯಕರ ಸಮ್ಮುಖದಲ್ಲಿ ಸಂಕಲ್ಪ ಪತ್ರ ಬಿಡುಗಡೆ ಮಾಡಲಾಯಿತು. ಈ ಪ್ರಣಾಳಿಕೆಯು ಯುವಕರು, ಉದ್ಯೋಗ, ಕೌಶಲ್ಯ ಅಭಿವೃದ್ಧಿ, ರೈತರು, ಹಿಂದುಳಿದ ವರ್ಗಗಳು, ದಲಿತರು ಮತ್ತು ಮಹಿಳಾ ಸಬಲೀಕರಣದ ಮೇಲೆ ಕೇಂದ್ರೀಕರಿಸುತ್ತದೆ. ಮುಂದಿನ ಐದು ವರ್ಷಗಳಲ್ಲಿ ಒಂದು ಕೋಟಿ ಸರ್ಕಾರಿ ಉದ್ಯೋಗಗಳು ಮತ್ತು ಉದ್ಯೋಗ ಸೃಷ್ಟಿಗೆ ಪ್ರಣಾಳಿಕೆ ಭರವಸೆ ನೀಡಿದೆ. ಆರ್ಥಿಕ ಅಭಿವೃದ್ಧಿ ಉಪಕ್ರಮಗಳ ಮೂಲಕ ಒಂದು ಕೋಟಿ ಮಹಿಳೆಯರು "ಲಖ್ಪತಿ ದೀದಿಗಳು" ಆಗಲು ಅನುವು ಮಾಡಿಕೊಡುವುದಾಗಿ ಎನ್‌ಡಿಎ ಪ್ರತಿಜ್ಞೆ ಮಾಡಿದೆ. ಬಡವರಿಗೆ ೫೦ ಲಕ್ಷ ಹೊಸ ಮನೆಗಳ ನಿರ್ಮಾಣ ಮತ್ತು

ದುರ್ಬಲ ಗುಂಪುಗಳಿಗೆ ಸಾಮಾಜಿಕ ಭದ್ರತಾ ಪಿಂಚಣಿಗಳನ್ನು ಖಚಿತಪಡಿಸುವ ಭರವಸೆಯನ್ನು ಪ್ರಣಾಳಿಕೆ ನೀಡುತ್ತದೆ. ಪ್ರಣಾಳಿಕೆಯ ಪ್ರಕಾರ, ರೈತರು ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ವಾರ್ಷಿಕವಾಗಿ ೯ ಸಾವಿರ ರೂಪಾಯಿಗಳನ್ನು ಪಡೆಯಲಿದ್ದಾರೆ, ಇದು ಪ್ರಸ್ತುತ ೩ ಸಹಾಯಧನಕ್ಕಿಂತ ೩ ಸಾವಿರ ರೂಪಾಯಿಯಷ್ಟು ಹೆಚ್ಚಳವಾಗಿದೆ.

ಸಂಕಲ್ಪ ಪತ್ರದ ಕುರಿತು ಮಾತನಾಡಿದ ರಾಜ್ಯ ಬಿಜೆಪಿ ಅಧ್ಯಕ್ಷ ದಿಲೀಪ್ ಜೈಸ್ವಾಲ್, ಎನ್‌ಡಿಎಯ ಪ್ರಣಾಳಿಕೆಯು ಪ್ರಧಾನಿ ನರೇಂದ್ರ ಮೋದಿಯವರ ಭರವಸೆ ಮತ್ತು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ವಿಶ್ವಾಸವನ್ನು ಸೂಚಿಸುತ್ತದೆ ಎಂದಿದ್ದಾರೆ.

******

ಭಾರತ ಮತ್ತು ಅಮೆರಿಕ ಮುಂದಿನ ೧೦ ವರ್ಷಗಳ ಕಾಲ ರಕ್ಷಣಾ ಕ್ಷೇತ್ರದಲ್ಲಿ ಸಹಕಾರಕ್ಕಾಗಿ ಒಪ್ಪಂದಕ್ಕೆ ಸಹಿ ಹಾಕಿವೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಮಲೇಷ್ಯಾದ ಕೌಲಾಲಂಪುರದಲ್ಲಿ ಅಮೆರಿಕದ ಯುದ್ಧ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಅವರೊಂದಿಗೆ ಸಭೆ ನಡೆಸಿರುವುದಾಗಿ ಹೇಳಿದ್ದಾರೆ. ಸಭೆಯ ಸಮಯದಲ್ಲಿ, ಉಭಯ ದೇಶಗಳು ರಕ್ಷಣಾ ಒಪ್ಪಂದಕ್ಕೆ ಸಹಿ ಹಾಕಿವೆ, ಇದು ಎರಡೂ ದೇಶಗಳ ಬಲವಾದ ರಕ್ಷಣಾ ಪಾಲುದಾರಿಕೆಯಲ್ಲಿ ಹೊಸ ಯುಗಕ್ಕೆ ನಾಂದಿ ಹಾಡುತ್ತದೆ. ಮುಕ್ತ, ಮತ್ತು ನಿಯಮಾಧಾರಿತ ಇಂಡೋ-ಪೆಸಿಫಿಕ್ ಪ್ರದೇಶವನ್ನು ಖಚಿತಪಡಿಸಿಕೊಳ್ಳಲು ಈ ಪಾಲುದಾರಿಕೆ ನಿರ್ಣಾಯಕವಾಗಿದೆ ಎಂದು ರಕ್ಷಣಾ ಸಚಿವರು ಹೇಳಿದ್ದಾರೆ. ಇದು ಎರಡೂ ರಾಷ್ಟ್ರಗಳ ಬೆಳೆಯುತ್ತಿರುವ ಕಾರ್ಯತಂತ್ರದ ಒಮ್ಮುಖದ ಸಂಕೇತವಾಗಿದೆ ಮತ್ತು ಪಾಲುದಾರಿಕೆಯ ಹೊಸ ದಶಕವನ್ನು ಪ್ರಕಟಿಸುತ್ತದೆ ಎಂದು ಸಚಿವರು ಹೇಳಿದರು.

******

ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಐದು ಪಂದ್ಯಗಳ ಕ್ರಿಕೆಟ್ ಸರಣಿಯ ಎರಡನೇ ಟಿ೨೦ ಪಂದ್ಯ ಇಂದು ಆಸ್ಟ್ರೇಲಿಯಾದ ಮೆಲ್ಬೋರ್ನ್‌ನಲ್ಲಿರುವ ಮೆಲ್ಬೋರ್ನ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೧:೪೫ ಕ್ಕೆ ಆರಂಭವಾಗಲಿದೆ. ಮಳೆಯಿಂದಾಗಿ ಮೊದಲ ಟಿ-೨೦ ಪಂದ್ಯವನ್ನು ರದ್ದುಗೊಳಿಸಲಾಗಿತ್ತು. ಇದಕ್ಕೂ ಮೊದಲು, ಆತಿಥೇಯರು ಏಕದಿನ ಸರಣಿಯನ್ನು ೨-೧ ಅಂತರದಿಂದ ಗೆದ್ದಿದ್ದರು.

***END***